ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ನೌಕರರ ವೇತನದ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

622 (726) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ನೌಕರರಿಗೆ ಕ್ಷುಲ್ಲಕ ಕಾರಣಗಳಿಗಾಗಿ ನೋಟಿಸ್ ಜಾರಿ ಮಾಡುವುದು, ವೇತನ ತಡೆಹಿಡಿಯುವುದು ಮತ್ತು ಇಲಾಖಾ ವಿಚಾರಣೆಗೆ ಒಳಪಡಿಸುವಂತಹ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಸರ್ಕಾರವು ಇತರೆ ಸರ್ಕಾರಿ ನೌಕರರಿಗೆ ನೀಡುತ್ತಿರುವ ಸಂಬಳ ಮತ್ತು ಇತರೆ ಭತ್ಯೆಗಳಿಗೆ ಹೋಲಿಸಿದಲ್ಲಿ ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ನೌಕರರಿಗೆ ನೀಡುತ್ತಿರುವ ಸಂಬಳ ಮತ್ತು ಇತರೆ ಭತ್ಯೆಗಳು ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ತಾರತಮ್ಯವನ್ನು ನಿವಾರಣೆ ಮಾಡಲು ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿರುವ ಕೆಎಸ್‌ಆರ್‌ಟಿಸಿ ಬಸ್ ಡಿಪೋಗಳ ಸಂಖ್ಯೆ ಎಷ್ಟು; ಈ ಡಿಪೋಗಳು ಹೊಂದಿರುವ ಬಸ್ಸುಗಳ ಸಂಖ್ಯೆ ಎಷ್ಟು; ಹಾಸನ ಜಿಲ್ಲೆಯ ಕೆಎಸ್‌ಆರ್‌ಟಿಸಿ ವಿಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ಮತ್ತು ಅವರುಗಳ ವಿವರ ನೀಡುವುದು; ಹಾಸನ ಜಿಲ್ಲೆಯಲ್ಲಿರುವ ಕೆಎಸ್‌ಆರ್‌ಟಿಸಿ ಬಸ್ಸು ನಿಲ್ದಾಣಗಳ ಸಂಖ್ಯೆ ಎಷ್ಟು ಮತ್ತು ಅವುಗಳ ವಿವರ ನೀಡುವುದು?